## ಕರ್ನಾಟಕ ಸರ್ಕಾರದ ನಡವಳಿ

ವಿಷಯ:- ಕೋಲಾರ ಜಿಲ್ಲೆ, ಮುಳಬಾಗಿಲು ತಾಲ್ಲೂಕು, ಗುಡಿಪಲ್ಲಿ ಗ್ರಾಮ ಪಂಚಾಯತ್‌ನ 1) ಶ್ರೀ ಎಂ.ಕೃಷ್ಣಪ್ಪ, ಕಾರ್ಯದರ್ಶಿ (ಪ್ರಸ್ತುತ ನಿವೃತ್ತ) 2) ಶ್ರೀಮತಿ ವಿಜಿಯಮ್ಮ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ರವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14(ಎ) ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

ಓದಲಾಗಿದೆ:- ನಿಬಂಧಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ D.O.No. Compt Uplok / BD- 1291 / 2018 /DRE-4, ದಿನಾಂಕ: 04-12-2019 .

**ಪ್ರಸ್ತಾವನೆ:-**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ರವರು ದಿನಾಂಕ:27-11-2019 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(3) ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಕೋಲಾರ ಜಿಲ್ಲೆ, ಬಾಗೇಪಲ್ಲಿ ತಾಲ್ಲೂಕು, ಊದವಾರಪಲ್ಲಿ ಗ್ರಾಮ ಗ್ರಾಮದ ನಿವಾಸಿಯಾದ ಶ್ರೀ ಶ್ರೀ ವಿ.ರಾಮಕೃಷ್ಣಪ್ಪ ಬಿನ್ ಲೇಟ್ ಅಂಜನೇಯಲು (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ರವರು ಕೋಲಾರ ಜಿಲ್ಲೆ ಮುಳಬಾಗಿಲು ತಾಲ್ಲೂಕು ಗುಡಿಪಲ್ಲಿ ಗ್ರಾಮ ಪಂಚಾಯತ್‌ನ 1) ಶ್ರೀ ಎಂ.ಕೃಷ್ಣಪ್ಪ, ಕಾರ್ಯದರ್ಶಿ (ಪ್ರಸ್ತುತ ನಿವೃತ್ತ), 2) ಶ್ರೀಮತಿ ವಿಜಿಯಮ್ಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧದ ದುರ್ನಡತೆ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆ, ಕಲಂ 9 ರಡಿ ತನಿಖೆಗೆ ತೆಗೆದುಕೊಂಡಿದೆ.

**ದೂರಿನ ಸಂಕ್ಷಿಪ್ತ ವಿವರಣೆ:-**

ಕೋಲಾರ ಜಿಲ್ಲೆ ಮುಳಬಾಗಿಲು ತಾಲ್ಲೂಕು ಗುಡಿಪಲ್ಲಿ ಗ್ರಾಮ ಪಂಚಾಯತ್‌ಗೆ ಸಂಬಂಧಿಸಿದಂತೆ, 14ನೇ ಹಣಕಾಸು ಯೋಜನೆಯಡಿಯಲ್ಲಿ ದಿನಾಂಕ:01-01-2016 ರಿಂದ 31-12-17 ರವರೆಗೆ ಸರ್ಕಾರದಿಂದ ಎಷ್ಟು ಹಣ ಮಂಜೂರಾಗಿದೆ? ಅದರಲ್ಲಿ ಎಷ್ಟು ಹಣ ಅಭಿವೃದ್ಧಿ ಕಾರ್ಯಗಳಿಗೆ ಖರ್ಚು ಮಾಡಲಾಗಿದೆ? ಎಂಬ ಬಗ್ಗೆ ಕ್ರಿಯಾ ಯೋಜನೆ ಮತ್ತು ಬ್ಯಾಂಕ್ ಘಾರ್ ಶೀಟ್, ನಗದು ಪುಸ್ತಕ ಮತ್ತು ವೋಚರ್‌ಗಳನ್ನು ಮಾಹಿತಿ ಹಕ್ಕು ಅಧಿನಿಯಮದಡಿ ಕೋರಿದ್ದು, ಎದುರುದಾರರು ಬ್ಯಾಂಕ್ ಘಾರ್ ಶೀಟ್ ಮಾತ್ರ ನೀಡಿದ್ದಾರೆ. ಅದನ್ನು ಪರಿಶೀಲಿಸಲಾಗಿ ರೂ. 54,44,605/- ಹಣ ಬಂದಿರುವುದು ಕಂಡು ಬಂದಿರುತ್ತದೆ. ಆದರೆ ನಗದು ಪುಸ್ತಕ ಮತ್ತು ವೋಚರ್‌ಗಳನ್ನು ನೀಡದಿರುವುದರಿಂದ ಮಾಹಿತಿ ಹಕ್ಕು ಮೇಲ್ಮನವಿ ಪ್ರಾಧಿಕಾರದ ಮುಂದೆ ಮೇಲ್ಮನವಿ ಸಲ್ಲಿಸಿದ್ದು, ದಾಖಲೆಗಳನ್ನು ನೀಡುವಂತೆ ನಿರ್ದೇಶನ ನೀಡಿದ್ದರೂ ಸಹ ಯಾವುದೇ ದಾಖಲೆಗಳನ್ನು ನೀಡಿಲ್ಲ. ಸದರಿ ಗ್ರಾಮ ಪಂಚಾಯತ್‌ಗೆ ಮಂಜೂರಾದ ಹಣವನ್ನು ಎದುರುದಾರರು ಅಭಿವೃದ್ಧಿ ಕೆಲಸಗಳಿಗೆ ಬಳಸದೇ ದುರುಪಯೋಗ ಪಡಿಸಿಕೊಂಡಿರುವುದಾಗಿ ತಿಳಿಸಿದ್ದಾರೆ.

**ದೂರಿಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ-**

1ನೇ ಎದುರುದಾರರು 14ನೇ ಹಣಕಾಸು ಯೋಜನೆಯಡಿಯಲ್ಲಿ ಪಂಚಾಯಿತಿಗೆ ಬಿಡುಗಡೆಯಾದ ಹಣವನ್ನು ಸರ್ಕಾರದ ಮಾರ್ಗಸೂಚಿಗಳಂತೆ ಖರ್ಚು ಮಾಡಿದ್ದು, ಅದಕ್ಕೆ ಸಂಬಂಧಪಟ್ಟ ಎಲ್ಲಾ ದಾಖಲೆಗಳನ್ನು ತಾವು ದೂರುದಾರರಿಗೆ ನಿಗಧಿತ ಅವಧಿಯಳಗೆ ಕಳುಹಿಸಿ ಕೊಡಲಾಗಿದೆ ಎಂದು ತಿಳಿಸಿದ್ದಾರೆ.

2ನೇ ಎದುರುದಾರರು ತಮ್ಮ ಪತ್ರದಲ್ಲಿ 1 ನೇ ಎದುರುದಾರರು ದೂರುದಾರರಿಗೆ ನೀಡಿದ ಮಾಹಿತಿಯ ಪ್ರಕಾರ 14ನೇ ಹಣಕಾಸು ಯೋಜನೆಯಡಿ ಪಂಚಾಯತ್‌ಗೆ ರೂ-54,26,603/- ಗಳು ಬಿಡುಗಡೆಯಾಗಿದ್ದು, ಅದರ ಪೈಕಿ ರೂ-26,26.493/- ಖರ್ಚಾಗಿದೆ. ತಾವು ಪ್ರಸ್ತುತ ಬೇರೆ ಪಂಚಾಯತ್‌ನಲ್ಲಿ ಕಾರ್ಯನಿರ್ವಹಿಸುತ್ತಿರುವುದರಿಂದ ಸಂಬಂಧಪಟ್ಟ ಪಂಚಾಯತ್ ರವರೊಂದಿಗೆ ವ್ಯವಹರಿಸಬೇಕೆಂದು ತಿಳಿಸಿದ್ದಾರೆ.

ಕಡತ ಮತ್ತು ದಾಖಲೆಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:

1) ಬೇರೆ ಬೇರೆ ಸಂಸ್ಥೆಗಳಿಂದ ದರ ಪಟ್ಟಿಯನ್ನು ಆಹ್ವಾನಿಸಿಲ್ಲ

2) ಸದರಿ ಖರ್ಚುಗಳಿಗೆ ಸಂಬಂಧಿಸಿದ ವೋಚರ್ ಲಭ್ಯವಿಲ್ಲ. ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತ್‌ನ ಲೆಕ್ಕಪತ್ರ ಮತ್ತು ಬಡ್ಜೆಟ್) ನಿಯಮಾವಳಿಗಳು, 2006ರ ನಿಯಮ 43ರನ್ವಯ ಪ್ರತಿ ಖರ್ಚಿಗೆ ಸಂಬಂಧಿಸಿದಂತೆ ಬಿಲ್ ಅಥವಾ ವೋಚರ್‌ಗಳು ಇರಬೇಕೆನ್ನುವುದು ಕಡ್ಡಾಯವಾಗಿದೆ. ಆದರೆ ಸದರಿ ಖರ್ಚುಗಳಿಗೆ ಸಂಬಂಧಿಸಿದ ವೋಚರ್‌ಗಳು ಲಭ್ಯವಿಲ್ಲ. ಸದರಿ ಚೆಕ್‌ಗಳನ್ನು ಆಯಾಯ ವ್ಯಕ್ತಿ / ಸಂಸ್ಥೆ ಹೆಸರಿಗೆ ನೀಡಿದ ಬಗ್ಗೆ ಸ್ವೀಕೃತಿಯನ್ನು ಪಡೆದ ಬಗ್ಗೆ ದಾಖಲೆಯಿಲ್ಲ. ಕಾರಣ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತ್‌ನ ಲೆಕ್ಕಪತ್ರ ಮತ್ತು ಬಡ್ಜೆಟ್) ನಿಯಮಾವಳಿಗಳು, 2006ರ ನಿಯಮಗಳು ಮತ್ತು ಕರ್ನಾಟಕ ಆರ್ಥಿಕ ಸಂಹಿತೆ ನಿಯಮಗಳು ಉಲ್ಲಂಘನೆಯಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

3) ಕೆಎಫ್‌ಸಿ ಪರಿಚ್ಛೇದ 17 ಮತ್ತು 57 ಹಾಗೂ ಸಾಧಿಲ್ವಾರು ವೆಚ್ಚದ ಕೈಪಿಡಿ 1958, ನಿಯಮಗಳ ನಿಯಮ 55(49)(ಎ)ಗಳನ್ನು ಪಾಲಿಸದೇ ಇರುವುದರಿಂದ, ಸದರಿ ಖರೀದಿ / ಖರ್ಚು ನಿಯಮಬಾಹಿರವಾಗಿದೆ.

4) 1 ಲಕ್ಷ ಮೀರಿದ ಖರೀದಿಗೆ ಕೆಟಿಪಿಪಿ ಕಾಯ್ದೆ ಅನ್ವಯವಾಗುತ್ತದೆ. ಸದರಿ ಕಾಯಿದೆಯ ನಿಯಮಾವಳಿಗಳಿಂದ ತಪ್ಪಿಸಿಕೊಳ್ಳಲು ಸದರಿ ಖರ್ಚುಗಳನ್ನು ಬೇರೆ ಬೇರೆ ದಿನಾಂಕಗಳಂದು ಮಾಡಲಾಗಿದೆಯೆಂಬಂತೆ ಬಿಲ್ಲು, ರಸೀದಿ / ಟ್ಯಾಕ್ಸ್ ಇನ್‌ವಾಯ್ಸ್‌ಗಳು ತಯಾರಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

5) ಸದರಿ ಬಿಲ್ಲುಗಳಲ್ಲಿ ಮಾರಾಟ ತೆರಿಗೆ ಮತ್ತು ಆದಾಯ ತೆರಿಗೆಯನ್ನು ಕಟಾಯಿಸಿ, ಆದಾಯ ಇಲಾಖೆಯ ಲೆಕ್ಕ ಶೀರ್ಷಿಕೆಗೆ ಮೊತ್ತವನ್ನು ಜಮಾ ಮಾಡಿದ ದಾಖಲೆಗಳಿಲ್ಲ.

6) ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತ್‌ನ ಲೆಕ್ಕಪತ್ರ ಮತ್ತು ಬಡ್ಜೆಟ್) ನಿಯಮಾವಳಿಗಳು, 2006ರ ನಿಯಮ 43ರನ್ವಯ ಸಂದಾಯವಾದ ಪ್ರತಿ ಬಿಲ್ಲುಗಳ ಮೇಲೆ ಚೆಕ್ ಸಂಖ್ಯೆ ಮತ್ತು ದಿನಾಂಕವನ್ನು ನಮೂದಿಸುವುದು ಕಡ್ಡಾಯವಾಗಿದೆ. ಆದರೆ ಟ್ಯಾಕ್ಸ್ ಇನ್‌ವಾಯ್ಸ್‌ಗಳ ಮೇಲೆ ಚೆಕ್ ಸಂಖ್ಯೆಯಾಗಲೀ, ದಿನಾಂಕವಾಗಲೀ ನಮೂದಿಸಿಲ್ಲ ಹಾಗೂ ನಮೂದಿಸಿದ ಖರ್ಚುಗಳ ಪೈಕಿ ಯಾವ ಖರ್ಚುಗಳಿಗೆ ಸಂಬಂಧಪಟ್ಟಿವೆಯೆಂಬ ಉಲ್ಲೇಖ ಎಲ್ಲಿಯೂ ಕಂಡುಬಂದಿಲ್ಲ. ಕಾರಣ ಸದರಿ ದಾಖಲೆಗಳನ್ನು ಅನುಕೂಲಕ್ಕೆ ತಕ್ಕಂತೆ ಬಳಸಲು ತಯಾರಿಸಿದೆ.

7) ಮೇಲೆ ಹೇಳಿದ ಕಾರಣಗಳಿಂದಾಗಿ ರೂ-13,46,067/-ಗಳ ಖರ್ಚು ನಿಯಮಾಬಾಹಿರವೆಂದು ಮೇಲ್ನೋಟಕ್ಕೆ ಕಂಡುಬಂದಿದೆ. ವರದಿಯಲ್ಲಿ ನಮೂದಿಸಿರುವಂತೆ 1ನೇ ಎದುರುದಾರರು ದಿನಾಂಕ: 22.01.16 ರಿಂದ ದಿನಾಂಕ: 31.12.16 ವರೆಗೆ ಮತ್ತು 2ನೇ ಎದುರುದಾರರು ದಿನಾಂಕ: 02.01.2017 ರಿಂದ ದಿನಾಂಕ: 31.12.2017 ರವರೆಗೆ ಗುಡಿಪಲ್ಲಿ ಗ್ರಾಮ ಪಂಚಾಯಿತಿಯಲ್ಲಿ ಪಂಚಾಯತ್ ಅಭಿವೃದ್ದಿ ಅಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸಿರುತ್ತಾರೆ. ಸದರಿಯವರುಗಳು ಕ್ರಮವಾಗಿ 5,56,701 ಮತ್ತು 7,79,366 ಗಳ ಮೊತ್ತಕ್ಕೆ ಜವಾಬ್ದಾರರಾಗಿರುತ್ತಾರೆ ಸದರಿ ಖರ್ಚುಗಳ ಅವಧಿಯಲ್ಲಿ 3ನೇ ಎದುರುದಾರರು ಪಂಚಾಯತ್ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿರುವುದರಿಂದ, ಸಂಪೂರ್ಣ ಮೊತ್ತಕ್ಕೆ ಸದರಿಯವರು ಜವಾಬ್ದಾರರಾಗಿ, ಎಲ್ಲಾ ಎದುರುದಾರರುಗಳು ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು, ಆಕ್ಷೇಪಣೆಯನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, 1 ರಿಂದ 2 ನೇ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ಸಮಂಜಸ ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ, 1ರಿಂದ 2 ನೇ ಎದುರುದಾರರು ಸರ್ಕಾರಿ / ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ / ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

ಅದಲ್ಲದೆ 1 ರಿಂದ 2ನೇ ಎದುರುದಾರರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966ರ ನಿಯಮ 3(1)ರ ಅಡಿಯಲ್ಲಿ ದುರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ ಹಾಗೂ 1 ನೇ ಎದುರುದಾರರು ದಿನಾಂಕ: 30.04.2018 ರಂದು ನಿವೃತ್ತಿ ಹೊಂದಿರುವುದರಿಂದ ಕೆಸಿಎಸ್‌ಆರ್ ನಿಯಮ 214(2) (ಬಿ)(i)ರ ಅಡಿ ಇಲಾಖಾ ವಿಚಾರಣೆಗೆ ಅನುಮತಿಯನ್ನು ಹಾಗೂ 2ನೇ ಎದುರುದಾರರ ಶ್ರೀಮತಿ ವಿಜಿಯಮ್ಮ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ರವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 14(ಎ) ಅಡಿ ಈ ಸಂಸ್ಥೆಗೆ ವಹಿಸಬೇಕೆಂದು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, ಸದರಿ ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ 1 ನೇ ಎದುರುದಾರರಾದ; ಶ್ರೀ ಎಂ.ಕೃಷ್ಣಪ್ಪ, ಕಾರ್ಯದರ್ಶಿ (ಪ್ರಸ್ತುತ ನಿವೃತ್ತ) ರವರು 30–04–2018 ರಂದು ನಿವೃತ್ತಿ ಹೊಂದಿರುವುದರಿಂದ ಕೆಸಿಎಸ್‌ಆರ್ ನಿಯಮ 214(2) (ಬಿ)(i)ರ ಅಡಿ ಹಾಗೂ 2ನೇ ಎದುರುದಾರರಾದ ಶ್ರೀಮತಿ ವಿಜಿಯಮ್ಮ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14(ಎ) ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/01/ಗ್ರಾಪಂಕಾ/2020**
**ಬೆಂಗಳೂರು, ದಿನಾಂಕ: 28 ನೇ ಜನವರಿ 2020.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ವಿಜಿಯಮ್ಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗುಡಿಪಲ್ಲಿ ಗ್ರಾಮ ಪಂಚಾಯಿತಿ, ಮುಳಬಾಗಿಲು ತಾಲ್ಲೂಕು, ಕೋಲಾರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14(ಎ) ರಡಿ ಮತ್ತು ಶ್ರೀ ಎಂ.ಕೃಷ್ಣಪ್ಪ, ಕಾರ್ಯದರ್ಶಿ ರವರು ಪ್ರಸ್ತುತ ನಿವೃತ್ತಿ ಹೊಂದಿರುವುದರಿಂದ ಕೆ.ಸಿ.ಎಸ್.ಆರ್ ನಿಯಮ 214(2)(ಬಿ)(i)ರಡಿ ಮಾನ್ಯ ಉಪಲೋಕಾಯುಕ್ತರು ರವರಿಗೆ ವಹಿಸಿ ಆದೇಶಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು ಆಪಾದಿತರಿಗೆ ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 28/01/2020.
(ನವೀನ್ ಕುಮಾರ್.ಬಿ)
ಉಪ ನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

28/01/20

**ಗೆ,**

1. ಮಹಾಲೇಖಪಾಲರು, ಬೆಂಗಳೂರು, ಕರ್ನಾಟಕ.
2. ಮಾನ್ಯ ಉಪಲೋಕಾಯುಕ್ತರು-4, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ 1 ರಿಂದ 277 ರವರೆಗೆ ಮೂಲ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೋಲಾರ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಮುಳಬಾಗಿಲು, ಕೋಲಾರ ಜಿಲ್ಲೆ.
6. ಶ್ರೀ ಎಂ.ಕೃಷ್ಣಪ್ಪ, ಕಾರ್ಯದರ್ಶಿ, ಗುಡಿಪಲ್ಲಿ ಗ್ರಾಮ ಪಂಚಾಯಿತಿ (ಪ್ರಸ್ತುತ ನಿವೃತ್ತ) ಮುಳಬಾಗಿಲು ತಾಲ್ಲೂಕು, ಕೋಲಾರ ಜಿಲ್ಲೆ. **(ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮುಳಬಾಗಿಲು ತಾಲ್ಲೂಕು, ಕೋಲಾರ ಜಿಲ್ಲೆ ಇವರ ಮುಖಾಂತರ)**
7. ಶ್ರೀಮತಿ ವಿಜಿಯಮ್ಮ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗುಡಿಪಲ್ಲಿ ಗ್ರಾಮ ಪಂಚಾಯಿತಿ , ಮುಳಬಾಗಿಲು ತಾಲ್ಲೂಕು, ಕೋಲಾರ ಜಿಲ್ಲೆ. **(ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮುಳಬಾಗಿಲು ತಾಲ್ಲೂಕು, ಕೋಲಾರ ಜಿಲ್ಲೆ ಇವರ ಮುಖಾಂತರ)**
8. ಗಣಕ ಕೋಶ. ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.